# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 48 (63) |
| ಸದಸ್ಯರ ಹೆಸರು | : | ಶ್ರೀ ಕಿಶೋರ್ ಕುಮಾರ್ ಪುತ್ತೂರ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 17.08.2026 |
| ಉತ್ತರಿಸುವ ಸಚಿವರು | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ<br>ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಕಲಾವಿದರು ಹಾಗೂ ಸಾಹಿತಿಗಳಿಗೆ ಅವರ ಜೀವನೋಪಾಯಕ್ಕೆ ನೆರವಾಗುವ ಉದ್ದೇಶದಿಂದ ಇಲಾಖೆಯ ವತಿಯಿಂದ ಹಲವು ವರ್ಷಗಳಿಂದ ಮಾಸಾಶನ (ಗೌರವಧನ) ನೀಡಲಾಗುತ್ತಿದ್ದು, ಆದರೆ ಕೆಲವು ತಿಂಗಳಿನಿಂದ ಮಾಸಾಶನ ಬಿಡುಗಡೆಯಾಗದೆ ಇರುವುದರಿಂದ ವಯೋವೃದ್ಧ ಹಾಗೂ ಆರ್ಥಿಕವಾಗಿ ದುರ್ಬಲ ಕಲಾವಿದರು ಮತ್ತು ಸಾಹಿತಿಗಳು ಸಂಕಷ್ಟಕ್ಕೆ ಒಳಗಾಗಿದ್ದಾರೆ ದೂರುಗಳು ಸರ್ಕಾರದ ಗಮನಕ್ಕೆ ಬಂದಿವೆಯೇ; ಈ ವಿಳಂಬಕ್ಕೆ ಕಾರಣವೇನು? | ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಕಷ್ಟ ಪರಿಸ್ಥಿತಿಯಲ್ಲಿರುವ ಹಿರಿಯ ಸಾಹಿತಿ/ಕಲಾವಿದರಿಗೆ ಹಾಗೂ ಮೃತ ಸಾಹಿತಿ/ಕಲಾವಿದರ ಪತ್ನಿಯರಿಗೆ ವಿಧವಾ ಮಾಸಾಶನವನ್ನು 2025-26ನೇ ಸಾಲಿನವರೆಗೆ ಖಜಾನೆ-2 BMS ತಂತ್ರಾಂಶದ ಮೂಲಕ ಪಾವತಿಸಲಾಗುತ್ತಿತ್ತು.<br><br>ಆರ್ಥಿಕ ಇಲಾಖೆಯ ಸೂಚನೆಯನ್ವಯ, 13,664 ಹಿರಿಯ ಸಾಹಿತಿ/ಕಲಾವಿದರು ಹಾಗೂ 377 ಮೃತ ಸಾಹಿತಿ/ಕಲಾವಿದರ ಪತ್ನಿಯರಿಗೆ ವಿಧವಾ ಮಾಸಾಶನವನ್ನು ಡಿ.ಬಿ.ಟಿ (Direct Benefit Transfer) ತಂತ್ರಾಂಶದ ಮೂಲಕ ಮಾಸಾಶನ ಪಾವತಿಸಲು ಕ್ರಮವಹಿಸಬೇಕಾಗಿತ್ತು. DBT ತಂತ್ರಾಂಶದ ಮೂಲಕ ಪ್ರಕ್ರಿಯೆ ದಿನಾಂಕ:25.02.2026ರಂದು ಪ್ರಾರಂಭಿಸಲಾಯಿತು. ನಂತರ ಜಿಲ್ಲಾ ಸಹಾಯಕ ನಿರ್ದೇಶಕರ ಕಚೇರಿಗಳಿಂದ ಫಲಾನುಭವಿಗಳಿಂದ ಅಗತ್ಯ ಮಾಹಿತಿಯನ್ನು ಪಡೆದು, ಸೇವಾಸಿಂಧು ಮತ್ತು DBT ತಂತ್ರಾಂಶದಲ್ಲಿ ಅಳವಡಿಸಲು ಸಮಯಾವಕಾಶ ತೆಗೆದುಕೊಂಡು ಎಲ್ಲಾ ಪ್ರಕ್ರಿಯೆಗಳನ್ನು ಕೈಗೊಂಡು ಇಲ್ಲಿಯವರೆಗೆ 11,730 ಜನರಿಗೆ DBT ತಂತ್ರಾಂಶದ ಮೂಲಕ ಏಪ್ರಿಲ್ ನಿಂದ ಜುಲೈ ಮಾಹೆಯವರೆಗೆ ಮಾಸಾಶನವನ್ನು ಪಾವತಿಸಲಾಗಿದೆ.<br><br>ಇನ್ನುಳಿದ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಆಧಾರ್ ಲಿಂಕ್ ಆಗದೇ ಇರುವ ಕಾರಣ ಹಾಗೂ ಜೀವಿತ ಪ್ರಮಾಣ ಪತ್ರ ಸಲ್ಲಿಸದೇ ಇರುವುದರಿಂದ ಮಾಸಾಶನ ಪಾವತಿಸಲು ಸಾಧ್ಯವಾಗಿರುವುದಿಲ್ಲ. ಸದರಿ ಪ್ರಕ್ರಿಯೆಯು ಚಾಲನೆಯಲ್ಲಿದ್ದು, ಅಗತ್ಯ ದಾಖಲೆಗಳನ್ನು ಫಲಾನುಭವಿಗಳಿಂದ ಪಡೆದು ಮಾಸಾಶನವನ್ನು ಪಾವತಿಸಲು ಕ್ರಮವಹಿಸಲಾಗುವುದು. |
| ಆ) | ಪ್ರಸ್ತುತ ಪಾವತಿಸುತ್ತಿರುವ ಮಾಸಾಶನದ ಮೊತ್ತವೆಷ್ಟು; ರಾಜ್ಯದಲ್ಲಿ ಮಾಸಾಶನ ಪಡೆಯುತ್ತಿರುವ ಕಲಾವಿದರು ಮತ್ತು ಸಾಹಿತಿಗಳ ಜಿಲ್ಲಾವಾರು ಮಾಹಿತಿ ನೀಡುವುದು: | ಪ್ರಸ್ತುತ DBT ಮೂಲಕ 13,664 ಜನ ಸಾಹಿತಿ/ಕಲಾವಿದರಿಗೆ ಮಾಹೆಯಾನ ರೂ.2,500/-ಗಳಂತೆ ಹಾಗೂ 377 ಮೃತ ಸಾಹಿತಿ /ಕಲಾವಿದರ ಪತ್ನಿಯರಿಗೆ ಮಾಹೆಯಾನ ರೂ.500/-ಗಳಂತೆ ವಿಧವಾ ಮಾಸಾಶನವನ್ನು ಪಾವತಿಸಲಾಗುತ್ತಿದ್ದು, ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-1**ರಲ್ಲಿರಿಸಿದೆ. |

| | | |
|---|---|---|
| ಇ) | ಮುಂದಿನ ದಿನಗಳಲ್ಲಿ ಮಾಸಾಶನವನ್ನು ಪ್ರತಿ ತಿಂಗಳು ನಿಗಧಿತ ದಿನಾಂಕದಂದು ಯಾವುದೇ ವಿಳಂಬವಿಲ್ಲದೆ ಬಿಡುಗಡೆ ಮಾಡಲು ಶಾಶ್ವತ ವ್ಯವಸ್ಥೆಯನ್ನು ಜಾರಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: | DBT ತಂತ್ರಾಂಶದ ಮೂಲಕ ಮಾಸಾಶನವನ್ನು ವಿಳಂಬವಿಲ್ಲದೆ ಪಾವತಿ ಮಾಡಲಾಗುವುದು. |
| ಈ) | ಸದರಿ ಮಾಸಾಶನ ಪಡೆಯಲು ಇರಬೇಕಾದ ಅರ್ಹತೆಗಳೇನು; ಮಾಸಾಶನಕ್ಕೆ ಆಯ್ಕೆ ಮಾಡುವ ಪ್ರಾಧಿಕಾರ ಯಾವುದು; | ಸರ್ಕಾರದ ಮಾರ್ಗಸೂಚಿಯನ್ನು **ಅನುಬಂಧ-2**ರಲ್ಲಿರಿಸಿದೆ. |
| ಉ) | ಸದರಿ ಮಾಸಾಶನ ತೀರಾ ಕನಿಷ್ಠವೆಂದು ಸರ್ಕಾರಕ್ಕೆ ಅನಿಸಿಲ್ಲವೆ; ಹೆಚ್ಚಿಸುವ ಪ್ರಸ್ತಾವ ಸರ್ಕಾರದ ಮುಂದೆ ಇದೆಯೇ: ಮಾಸಾಶನ ಹೆಚ್ಚಿಸಲು ಯಾವಾಗ ಕ್ರಮ ಕೈಗೊಳ್ಳಲಾಗುವುದು? | 2025-26ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-374 ಯಂತೆ ಸರ್ಕಾರದ ಆದೇಶ ಸಂಖ್ಯೆ: ಕಸಂವಾ 103 ಕಸಧ 2025 ದಿನಾಂಕ:24.06.2025ರಲ್ಲಿ ಕಲಾವಿದರ ಮಾಸಾಶನವನ್ನು ರೂ.2,000/- ಗಳಿಂದ ರೂ.2,500/-ಕ್ಕೆ ಹೆಚ್ಚಿಸಿ ಆದೇಶಿಸಿದ್ದು, ಪ್ರತಿಯನ್ನು **ಅನುಬಂಧ-3**ರಲ್ಲಿರಿಸಿದೆ. |

ಸಂಖ್ಯೆ: ಕಸಂವಾ 65 ಕವಿಸ 2026

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು

## ಅನುಬಂಧ-1

### ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪ್ರಸ್ತುತ ಮಾಸಾಶನ ಪಡೆಯುತ್ತಿರುವ ಸಾಹಿತಿ/ಕಲಾವಿದರ ಸಂಖ್ಯೆ

| ಕ್ರ ಸಂ | ಜಿಲ್ಲೆಗಳ ಹೆಸರು | ಮಾಸಾಶನ ಪಡೆಯುತ್ತಿರುವ ಸಾಹಿತಿ/ಕಲಾವಿದರ ಸಂಖ್ಯೆ | ಮೃತ ಕಲಾವಿದರ ಪತ್ನಿಯರಿಗೆ ವಿಧವಾ ಮಾಸಾಶನದಾರರ ಸಂಖ್ಯೆ |
|---|---|---|---|
| 1 | ಬೆಂಗಳೂರು ನಗರ | 368 | 24 |
| 2 | ಬೆಂಗಳೂರು ಗ್ರಾ. | 569 | 7 |
| 3 | ಬೆಂಗಳೂರು ದಕ್ಷಿಣ | 292 | 10 |
| 4 | ಚಿಕ್ಕಬಳ್ಳಾಪುರ | 306 | 4 |
| 5 | ಕೋಲಾರ | 433 | 15 |
| 6 | ತುಮಕೂರು | 453 | 56 |
| 7 | ಮೈಸೂರು | 315 | 17 |
| 8 | ಚಾಮರಾಜನಗರ | 211 | 13 |
| 9 | ಮಂಡ್ಯ | 497 | 15 |
| 10 | ಮಡಿಕೇರಿ(ಕೊಡಗು) | 12 | 0 |
| 11 | ಹಾಸನ | 121 | 7 |
| 12 | ಶಿವಮೊಗ್ಗ | 215 | 8 |
| 13 | ದಾವಣಗೆರೆ | 230 | 6 |
| 14 | ಮಂಗಳೂರು(ದ.ಕ) | 68 | 5 |
| 15 | ಉಡುಪಿ | 81 | 3 |
| 16 | ಹಾವೇರಿ | 511 | 15 |
| 17 | ವಿಜಯಪುರ | 1002 | 36 |
| 18 | ಬಾಗಲಕೋಟೆ | 2708 | 49 |
| 19 | ಕಾರವಾರ(ಉ.ಕ.) | 110 | 2 |
| 20 | ಕಲಬುರಗಿ | 285 | 10 |
| 21 | ಯಾದಗಿರಿ | 35 | 1 |
| 22 | ಬಳ್ಳಾರಿ | 101 | 5 |
| 23 | ಬೀದರ್ | 733 | 4 |
| 24 | ಕೊಪ್ಪಳ | 290 | 7 |
| 25 | ಚಿತ್ರದುರ್ಗ | 223 | 10 |
| 26 | ಚಿಕ್ಕಮಗಳೂರು | 155 | 3 |
| 27 | ಬೆಳಗಾವಿ | 1812 | 13 |
| 28 | ಧಾರವಾಡ | 619 | 7 |
| 29 | ಗದಗ | 444 | 13 |
| 30 | ರಾಯಚೂರು | 121 | 7 |
| 31 | ವಿಜಯನಗರ | 344 | 5 |
| | ಒಟ್ಟು | 13664 | 377 |

ಜಂಟಿ ನಿರ್ದೇಶಕರು(ಸು.ಕ)
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಬೆಂಗಳೂರು

ಅನುಬಂಧ - 2

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ ಚಾಲ್ತಿಯಲ್ಲಿರುವ ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ:
1. ದಿನಾಂಕ: 28-07-2014 ಕಸಂವಾ 611 ಕಸಧ 2014ರ ಸರ್ಕಾರಿ ಆದೇಶ.
2. ದಿನಾಂಕ: 02-12-2014 ಕಸಂವಾ 938 ಕಸಧ 2014ರ ಸರ್ಕಾರಿ ಆದೇಶ.
3. ದಿನಾಂಕ: 08-12-2014 ಕಸಂವಾ 14 ಕಗೌಧ 2014ರ ಸರ್ಕಾರಿ ಆದೇಶ.
4. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆರವರ ಪತ್ರ ದಿನಾಂಕ:21.05.2015.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ (1, 2 ಮತ್ತು 3)ರ ಆದೇಶಗಳಲ್ಲಿ ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ, ಮಾರ್ಗಸೂಚಿಗಳನ್ನು ಹೊರಡಿಸಿ ಆದೇಶ ರೂಪಿಸಲಾಗಿರುತ್ತದೆ.

2. ಮೇಲೆ ಓದಲಾದ ಕ್ರಮಸಂಖ್ಯೆ (4)ರ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವರು ಈಗಾಗಲೇ ಹೊರಡಿಸಿರುವ ಮಾರ್ಗಸೂಚಿಗಳನ್ನು ಪರಿಷ್ಕರಿಸಿ, ಈ ಕೆಳಕಂಡ ವಿವಿಧ ಯೋಜನೆಗಳಿಗೆ ಪರಿಷ್ಕೃತ/ ಹೊಸ ಮಾರ್ಗಸೂಚಿಗಳ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

1. ಸಂಘ-ಸಂಸ್ಥೆಗಳಿಗೆ ಧನಸಹಾಯ.
2. ಸಂಘ-ಸಂಸ್ಥೆಗಳಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳ ಪ್ರಾಯೋಜನೆ.
3. ಸಾಂಸ್ಕೃತಿಕ ಭವನ/ ರಂಗಮಂದಿರಗಳ ನಿರ್ಮಾಣಕ್ಕೆ ಅನುದಾನ/ಧನಸಹಾಯ.
4. ವಾರ್ಷಿಕ ಪ್ರಶಸ್ತಿಗಳು (ಸಾಹಿತ್ಯ ಸಂಸ್ಕೃತಿ ವಿಭಾಗ, ಸಂಗೀತ ನೃತ್ಯ ವಿಭಾಗ, ರಂಗಭೂಮಿ ವಿಭಾಗ, ಲಲಿತಕಲಾ ವಿಭಾಗ).
5. ಜಯಂತಿಗಳು.
6. ಜಿಲ್ಲಾ ಉತ್ಸವಗಳು.
7. ಪ್ರಕಟಿತ ಗ್ರಂಥಗಳಿಗೆ ಧನಸಹಾಯ.
8. ಪಿಹೆಚ್‌ಡಿ ಸಂಶೋಧನಾ ಪ್ರಬಂಧಗಳ ಹಸ್ತಪ್ರತಿ ಮುದ್ರಣಕ್ಕೆ ಧನಸಹಾಯ.
9. ಎಂಫಿಲ್ ಪ್ರೌಢ ಪ್ರಬಂಧಗಳ ಹಸ್ತಪ್ರತಿ ಮುದ್ರಣಕ್ಕೆ ಧನಸಹಾಯ.
10. ಕಷ್ಟಪರಿಸ್ಥಿತಿಯಲ್ಲಿರುವ ಸಾಹಿತಿ/ಕಲಾವಿದರಿಗೆ ಮಾಸಾಶನ ಮಂಜೂರಾತಿ.
11. ಕನ್ನಡ ಬಾರದವರಿಗೆ ಕನ್ನಡ ಕಲಿಸುವ ಯೋಜನೆ.
12. ಜನಪದ ಪ್ರದರ್ಶನ ಕಲೆಗಳಲ್ಲಿ ಮಹಿಳೆಯರಿಗೆ ತರಬೇತಿ ಕಾರ್ಯಾಗಾರ ಹಾಗೂ ತಂಡಗಳ ಸಿದ್ಧತೆ.

2) ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 340 ಕಸಧ 2015, ಬೆಂಗಳೂರು, ದಿನಾಂಕ: 18-09-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ, ಇಲಾಖೆಯು ಅನುಸರಿಸಬೇಕಾದ ಅನುಬಂಧ 1 ರಿಂದ 12 ರವರೆಗಿನ ಮಾರ್ಗಸೂಚಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ 1 ರಿಂದ 3 ರವರೆಗಿನ ಆದೇಶಗಳಲ್ಲಿ ಹೊರಡಿಸಲಾದ ಮಾರ್ಗಸೂಚಿಗಳನ್ನು ನಿರಸನಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಲ್ಲಿಕಾರ್ಜುನ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ, ಸಂಸ್ಕೃತಿ ಹಾಗೂ ವಾರ್ತಾ ಇಲಾಖೆ.

E-7372/2015/21-09-15

ಗೆ:
1. ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
2. ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಎಲ್ಲಾ ಸಹಾಯಕ ನಿರ್ದೇಶಕರುಗಳಿಗೆ (ನಿರ್ದೇಶಕರ ಮುಖಾಂತರ).
4. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಸಹಾಯಕರು/ ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು/ ಅಧೀನ ಕಾರ್ಯದರ್ಶಿಗಳು, ಸಮನ್ವಯ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಇಲಾಖೆ.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂಖ್ಯೆ: ಕಸಂವಾ 340 ಕಸಧ 2015, ಬೆಂಗಳೂರು, ದಿನಾಂಕ: 18-09-2015

## ಅನುಬಂಧ - 10

### ಕಷ್ಟ ಪರಿಸ್ಥಿತಿಯಲ್ಲಿರುವ ಸಾಹಿತಿ/ಕಲಾವಿದರಿಗೆ ಮಾಸಾಶನ ಮಂಜೂರಾತಿ ನಿಯಮಗಳ ಮಾರ್ಗಸೂಚಿ

1. ಸಾಹಿತ್ಯ, ಸಂಗೀತ, ನೃತ್ಯ, ನಾಟಕ, ಜನಪದ, ಯಕ್ಷಗಾನ, ಬಯಲಾಟ, ಲಲಿತಕಲೆ, ಶಿಲ್ಪಕಲೆ ಕ್ಷೇತ್ರಗಳಲ್ಲಿ 25 ವರ್ಷಗಳ ಕಾಲ ಗಣನೀಯ ಸೇವೆ ಸಲ್ಲಿಸಿ ಕಷ್ಟ ಪರಿಸ್ಥಿತಿಯಲ್ಲಿರುವ ಕಲಾವಿದರು ಮಾಸಾಶನ ಪಡೆಯಲು ಅರ್ಜಿ ಸಲ್ಲಿಸಬಹುದು. ಸಂಬಂಧಿತ ವಿಷಯ ಕ್ಷೇತ್ರದಲ್ಲಿ 25 ವರ್ಷಗಳ ಗಣನೀಯ ಸೇವೆ ಸಲ್ಲಿಸಿರುವ ಬಗ್ಗೆ ಆಯಾ ಜಿಲ್ಲಾ ಸಹಾಯಕ ನಿರ್ದೇಶಕರ ಮೂಲಕ ಮೂಲ ದಾಖಲೆಗಳನ್ನು ಪರಿಶೀಲನೆಗೊಳಪಡಿಸಿ ದೃಢೀಕರಣ ಪಡೆಯಬೇಕು.

2. ಕಲಾವಿದರು ಕನಿಷ್ಠ 58 ವಯೋಮಾನದವರಾಗಿರಬೇಕು. ವಯಸ್ಸಿನ ಬಗ್ಗೆ ಶಿಕ್ಷಣ ಸಂಸ್ಥೆ ನೀಡಿದ ಅಥವಾ ನ್ಯಾಯಾಲಯದಿಂದ ಅಫಿಡವಿಟ್ ಪಡೆದು ಸಲ್ಲಿಸಬೇಕು.

3. ಕಲಾವಿದರು ತಹಶೀಲ್ದಾರ್ ಅವರಿಂದ ಪಡೆದ ವಾರ್ಷಿಕ ಆದಾಯ ಪ್ರಮಾಣಪತ್ರವನ್ನು ಸಲ್ಲಿಸಬೇಕು. (ಗ್ರಾಮಾಂತರ ಪ್ರದೇಶಗಳಿಗೆ ರೂ. 40,000/- ಹಾಗೂ ಪಟ್ಟಣ ಪ್ರದೇಶಗಳಿಗೆ ರೂ. 50,000/- ಗರಿಷ್ಠ ಆದಾಯ ಮಿತಿಗೆ ಒಳಪಟ್ಟಂತೆ ಆದಾಯ ಹೊಂದಿರಬೇಕು.

4. ಅಂಗವಿಕಲ ಕಲಾವಿದರಿಗೆ ವಯಸ್ಸು 40 ವರ್ಷಗಳಾಗಿದ್ದರೆ ಅಥವಾ 20 ವರ್ಷಗಳಿಂದ ಸೇವೆ ಸಲ್ಲಿಸಿದ್ದರೆ, ಮಾಸಾಶನ ಮಂಜೂರಾತಿಗೆ ಅರ್ಜಿಯನ್ನು ಪರಿಗಣಿಸಲಾಗುವುದು. ಶೇ. ದೈಹಿಕ ಅಂಗವಿಕಲತೆಯ ಬಗ್ಗೆ ಅಧಿಕೃತ ವೈದ್ಯಕೀಯ ದಾಖಲೆಗಳನ್ನು ಸಲ್ಲಿಸಬೇಕು. 20 ವರ್ಷಗಳಿಂದ ಸೇವೆ ಸಲ್ಲಿಸಿರುವ ಬಗ್ಗೆ ಸಂಬಂಧಿತ ಕಲಾವಿದರು ಮೂಲ ದಾಖಲೆಗಳನ್ನು ಪರಿಶೀಲಿಸಿ ಜಿಲ್ಲಾ ಸಹಾಯಕ ನಿರ್ದೇಶಕರಿಂದ ದೃಢೀಕರಣ ಪಡೆಯಬೇಕು.

5. ಸಾಹಿತಿ ಕಲಾವಿದರಿಗೆ ಮಾಹೆಯಾನ ಮಾಸಾಶನ ರೂ.1,500/-ಗಳಾಗಿರುತ್ತದೆ.

6. <u>ಈಗಾಗಲೇ ರಾಜ್ಯ ಅಥವಾ ಕೇಂದ್ರ ಸರ್ಕಾರದ ಬೇರೆ ಬೇರೆ ಯೋಜನೆಗಳಡಿಯಲ್ಲಿ ಮಾಸಾಶನ ಪಡೆಯುತ್ತಿದ್ದಲ್ಲಿ ಈ ಯೋಜನೆಯಡಿಯಲ್ಲಿ ಅರ್ಜಿಯನ್ನು ಸಲ್ಲಿಸುವಂತಿಲ್ಲ.</u>

7. ಮಾಸಾಶನಕ್ಕೆ ಅರ್ಜಿ ಸಲ್ಲಿಸಬಯಸುವ ಸಾಹಿತಿ ಕಲಾವಿದರು ಆಯಾ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಿಂದ ನಿಗದಿತ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿ ಆಯಾ ಜಿಲ್ಲಾ ಸಹಾಯಕ ನಿರ್ದೇಶಕರಿಗೇ ಸಲ್ಲಿಸಬೇಕು. ಜಿಲ್ಲಾ ಸಹಾಯಕ ನಿರ್ದೇಶಕರು ಮಾರ್ಗಸೂಚಿಯನುಸಾರ, ಸೇವೆಯ ಬಗ್ಗೆ ಮೂಲ ದಾಖಲೆಗಳನ್ನು ಪರಿಶೀಲಿಸಿ, ದೃಢೀಕರಿಸಿ, ಕಲಾವಿದರ ವಯಸ್ಸು, ವರಮಾನ, ಕ್ಷೇತ್ರ, ಕಲಾಸೇವೆ ವಿವರಗಳನ್ನು ಪ್ರತ್ಯೇಕವಾಗಿ (ಸಾಹಿತ್ಯ, ಸಂಗೀತ, ನೃತ್ಯ, ನಾಟಕ, ಲಲಿತಕಲೆ, ಶಿಲ್ಪಕಲೆ, ಜನಪದ, ಯಕ್ಷಗಾನ, ) ಪಟ್ಟಿ-ಮಾಡಿ ಮೂಲ ಅರ್ಜಿಗಳ ಸಮೇತ ಸಂಬಂಧಿತ ಅಕಾಡೆಮಿಗಳಿಗೆ ಕಳುಹಿಸಬೇಕು.

8. ಅರ್ಜಿದಾರರು ಎರಡು ಬದಿಗಳುಳ್ಳ ದ್ವಿಪ್ರತಿಯ ಮಾಸಾಶನ ಅರ್ಜಿಯನ್ನು ಅವರ ಇತ್ತೀಚಿನ ಭಾವಚಿತ್ರ, ಸರಿಯಾದ ಅಂಚೆ ವಿಳಾಸ ಮತ್ತು ಅಗತ್ಯ ದಾಖಲೆಗಳೊಂದಿಗೆ ಕಲಾಸೇವೆ ಮೂಲ ದಾಖಲೆ ಅಥವಾ (ಗಜೆಟೆಡ್)ಪತ್ರಾಂಕಿತ ಅಧಿಕಾರಿಯಿಂದ ದೃಢೀಕೃತವಾದ ದಾಖಲೆಗಳೊಂದಿಗೆ ಸಹಿ ಮಾಡಿ ಲಗತ್ತಿಸಿರಬೇಕು. ಭಾವಚಿತ್ರಗಳನ್ನು ಅರ್ಜಿಯ ಮೇಲೆ ಲಗತ್ತಿಸಿ ಭಾವಚಿತ್ರಗಳಿಗೆ ಪತ್ರಾಂಕಿತ ಅಧಿಕಾರಿಯಿಂದ ದೃಢೀಕರಣ ಪಡೆಯಬೇಕು.

9. ಜಿಲ್ಲಾ ಸಹಾಯಕ ನಿರ್ದೇಶಕರು [illegible] ಸ್ವೀಕರಿಸಿದ ಮಾಸಾಶನದ ಅರ್ಜಿಗಳನ್ನು ಕೂಲಂಕುಷವಾಗಿ ಪರಿಶೀಲಿಸಿದ ನಂತರ [illegible] (ಶಿಫಾರಸ್ಸು) [illegible] ಭಾಗದಲ್ಲಿ [illegible] ಬಗ್ಗೆ ತಮ್ಮ ಖಚಿತ ಅಭಿಪ್ರಾಯ ತಿಳಿಸಿ ಸಹಿ ಮತ್ತು ಮೊಹರನ್ನು ಕಡ್ಡಾಯವಾಗಿ ನಮೂದಿಸಬೇಕು. ಸಹಿ ಮತ್ತು [illegible] ಇಲ್ಲದ ದಾಖಲೆಗಳಿಲ್ಲದ ಅಪೂರ್ಣ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಹಾಗೂ ಅಂತಹ ಅರ್ಜಿಗಳನ್ನು [illegible] ಅದನ್ನು ಕರ್ತವ್ಯ ಲೋಪವೆಂದು ಪರಿಗಣಿಸಿ ಅವರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು.

10. ಕಲಾವಿದರು ಅನಕ್ಷರಸ್ಥರಾಗಿದ್ದು, ಸಹಿಯ ಬದಲು ಹೆಬ್ಬೆಟ್ಟು ಗುರುತು ನಮೂದಿಸಿದಲ್ಲಿ, ಅವರ ಹೆಬ್ಬೆಟ್ಟಿನ ಗುರುತನ್ನು "ಈ ಹೆಬ್ಬೆಟ್ಟಿನ ಗುರುತು ______ ಅವರದ್ದು" ಎಂದು ಪ್ರಮಾಣಿಸಿ ದೃಢೀಕರಿಸಬೇಕು.

11. ಜಿಲ್ಲಾ ಸಹಾಯಕ ನಿರ್ದೇಶಕರುಗಳಿಗೆ ಸಲ್ಲಿಕೆಯಾದ ದ್ವಿಪ್ರತಿಯ ಮಾಸಾಶನದ ನಿಗದಿತ ಅರ್ಜಿ ನಮೂನೆಯನ್ನು ಸಂಬಂಧಿಸಿದ ಕಲಾವಿದರ ಮೂಲ ದಾಖಲೆಗಳೊಂದಿಗೆ ಕಲಾಸೇವೆಯ ಬಗ್ಗೆ ಪರಿಶೀಲಿಸಿ ನಿಯಮಾನುಸಾರ ಸಲ್ಲಿಕೆಯಾಗಿರುವ ಅರ್ಜಿಗಳ ನಕಲು ಪ್ರತಿಯನ್ನು ಕಚೇರಿಯಲ್ಲಿ ಸಂರಕ್ಷಿಸಿಟ್ಟು, ಮೂಲ ಅರ್ಜಿಯನ್ನು ದಾಖಲೆಗಳ ಸಮೇತ ತನ್ನ ಶಿಫಾರಸ್ಸಿನೊಂದಿಗೆ ಸಂಬಂಧಿಸಿದ ಅಕಾಡೆಮಿಗೆ ಪ್ರತಿ ತಿಂಗಳ ಮೊದಲ ವಾರದಲ್ಲಿ ಕಳುಹಿಸಿಕೊಡಬೇಕು. ಮತ್ತು ಕಲಾವಿದರಿಗೆ ಈ ಬಗ್ಗೆ ಸೂಕ್ತ ಹಿಂಬರಹ ನೀಡುವುದು.

12. ಅಕಾಡೆಮಿಗಳು ಸ್ವೀಕೃತವಾದ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಅವಶ್ಯವಿದ್ದಲ್ಲಿ ಅಂತಿಮ ಹಂತದಲ್ಲಿ ಕಲಾವಿದರ ಸಂದರ್ಶನ ನಡೆಸಿ, ಕಲಾಸೇವೆಯ ಬಗ್ಗೆ ಖಚಿತ ಪಡಿಸಿಕೊಂಡು, ಅರ್ಜಿಗಳನ್ನು ಸ್ಥಾಯಿ ಸಮಿತಿಯಲ್ಲಿ ಮಂಡಿಸಿ ತೀರ್ಮಾನ ಪಡೆದು ಸೂಕ್ತ ಶಿಫಾರಸ್ಸಿನೊಂದಿಗೆ ಇಲಾಖೆಗೆ ಕಳುಹಿಸಿಕೊಡಬೇಕು.

13. ಅರ್ಜಿದಾರರು ತನ್ನ ಅರ್ಜಿಯೊಂದಿಗೆ ವಾರ್ಷಿಕ ವರಮಾನ ಪ್ರಮಾಣಪತ್ರ, ವಯಸ್ಸಿನ ದಾಖಲೆ, ಸೇವಾ ಪ್ರಮಾಣ ಪತ್ರಗಳನ್ನು ಪಡೆದ ನಂತರವೂ ಯಾವುದೇ ಸಂದರ್ಭದಲ್ಲಿ ಕಲಾವಿದರ ದಾಖಲೆಗಳ ಬಗ್ಗೆ ಅನುಮಾನ ಬಂದಲ್ಲಿ ಅಂತಹ ಪ್ರಕರಣಗಳ ಬಗ್ಗೆ ತನಿಖೆ ನಡೆಸಿ ಸಮಂಜಸವೆನಿಸಿದಲ್ಲಿ ಮಾಸಾಶನವನ್ನು ರದ್ದು ಪಡಿಸಲಾಗುವುದು. ಹಾಗೂ ಸುಳ್ಳು ಮಾಹಿತಿ ನೀಡಿದ ಆರೋಪದ ಮೇಲೆ ಕಾನೂನು ಕ್ರಮ ಜರುಗಿಸಲಾಗುವುದು.

(ಮಲ್ಲಿಕಾರ್ಜುನ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ, ಸಂಸ್ಕೃತಿ ಹಾಗೂ ವಾರ್ತಾ ಇಲಾಖೆ.

ನಿರ್ದೇಶಕರ ಪರವಾಗಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಬೆಂಗಳೂರು

ಅನುಬಂಧ ~~4~~-3

4

ಅನುಬಂಧ-3

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2025-26ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-374ರಂತೆ ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿನ ಕಲಾವಿದರ ಮಾಸಾಶನವನ್ನು 2,000 ರೂ.ಗಳಿಂದ 2,500 ರೂ.ಗಳಿಗೆ ಹೆಚ್ಚಿಸಲು ಅನುದಾನ ಮಂಜೂರು ಮಾಡುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಕಸಂವಾ 01 ಕಗೌಧ 2025, ದಿನಾಂಕ:17.04.2025.
2. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 554 ವೆಚ್ಚ-7/2025, ದಿನಾಂಕ:22.05.2025.
3. ಸರ್ಕಾರದ ಆದೇಶ ಸಂಖ್ಯೆ: ಕಸಂವಾ 103 ಕಸಧ 2025, ದಿನಾಂಕ:09.06.2025.
4. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಏಕಕಡತ ಸಂಖ್ಯೆ: ಡಿಕಸಿ- 13011/8/2025 (1714871).

*****

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಆದೇಶದಲ್ಲಿ, ಕಷ್ಟಪರಿಸ್ಥಿತಿಯಲ್ಲಿರುವ ಸಾಹಿತಿ/ಕಲಾವಿದರ ಮಾಸಾಶನ ಹಾಗೂ ವಿಧವಾ ಮಾಸಾಶನ ಪಾವತಿ ಮಾಡಲು 2025-26ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ: 2205-00-102-1-18-251ರಡಿ ಹಂಚಿಕೆ ಮಾಡಿರುವ ರೂ.4392.82 ಲಕ್ಷಗಳಲ್ಲಿ, ಏಪ್ರಿಲ್-2025 ರಿಂದ ಜೂನ್-2025ರವರೆಗಿನ ಮೊದಲನೇ ಕಂತಿನ ಅನುದಾನ ರೂ.10,98,21,000/-ಗಳನ್ನು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರಿಗೆ ಬಿಡುಗಡೆ ಮಾಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (2)ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ, 2025-26ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-374 ರಲ್ಲಿನ "ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿನ ಕಲಾವಿದರ ಮಾಸಾಶನವನ್ನು 2,000 ರೂ.ಗಳಿಂದ 2,500 ರೂ.ಗಳಿಗೆ ಹೆಚ್ಚಿಸಲಾಗುವುದು ಎಂಬ ಘೋಷಣೆಯನ್ನು 2025-26ರ ಆಯವ್ಯಯ ಸೂಚನ ದಿನಾಂಕ:09.04.2025ರಲ್ಲಿ ತಿಳಿಸಿರುವಂತೆ 2025-26ನೇ ಸಾಲಿನ ಲೆಕ್ಕಶೀರ್ಷಿಕೆ:2205-00-102-1-8-251ರಡಿ ಒದಗಿಸಿರುವ ರೂ.4392.82 ಲಕ್ಷಗಳ ಅನುದಾನದಿಂದ ಅನುಷ್ಠಾನಗೊಳಿಸಲು ಸಹಮತಿ ನೀಡಿರುತ್ತದೆ.

ಮೇಲೆ ಓದಲಾದ (2)ರ ಆದೇಶದಲ್ಲಿ, 2025-26ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-374ರಂತೆ ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿನ ಕಲಾವಿದರ ಮಾಸಾಶನವನ್ನು 2,000 ರೂ.ಗಳಿಂದ 2,500 ರೂ.ಗಳಿಗೆ ಹೆಚ್ಚಿಸಲು ಸರ್ಕಾರದ ತಾತ್ವಿಕ ಅನುಮೋದನ ನೀಡಲಾಗಿದೆ.

ಮೇಲೆ ಓದಲಾದ (3)ರ ಏಕಕಡತದಲ್ಲಿ, 2025-26ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-374ರಲ್ಲಿ, ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿನ ಕಲಾವಿದರ ಮಾಸಾಶನವನ್ನು 2,000 ರೂ. ಗಳಿಂದ 2,500 ರೂ. ಗಳಿಗೆ ಹೆಚ್ಚಿಸಿ, ಮಾಸಾಶನಕ್ಕೆ ಬೇಕಾಗುವ ಒಟ್ಟಾರೆ ಮೊತ್ತವನ್ನು ಲೆಕ್ಕಶೀರ್ಷಿಕೆ: 2205-00-102-1-18-251ರಡಿ ರೂ.40,76,72,000/-ಗಳನ್ನು ಬಿಡುಗಡೆ ಮಾಡಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 103 ಕಸಧ 2025**
**ಬೆಂಗಳೂರು, ದಿನಾಂಕ:24.06.2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2025-26ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-374ರಂತೆ ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿನ ಕಲಾವಿದರ ಮಾಸಾಶನವನ್ನು 2,000 ರೂ. ಗಳಿಂದ 2,500 ರೂ. ಕ್ಕೆ ಹೆಚ್ಚಿಸಲು ಸರ್ಕಾರದ ಅನುಮೋದನ ನೀಡಿದೆ.

ಮುಂದುವರೆದು, ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿನ ಕಲಾವಿದರ ಮಾಸಾಶನ ಪಾವತಿಸಲು ತಗಲುವ ವೆಚ್ಚವನ್ನು 2025-26ನೇ ಸಾಲಿನ ಕ್ರಿಯಾಯೋಜನೆಯಲ್ಲಿ ಲೆಕ್ಕಶೀರ್ಷಿಕೆ: 2205-00-102-1-18-251ರಡಿ ರೂ.32,94,61,000/-(ರೂಪಾಯಿ ಮೂವತ್ತೆರಡು ಕೋಟಿ ತೊಂಬತ್ನಾಲ್ಕು ಲಕ್ಷದ ಅರವತ್ತೊಂದು ಸಾವಿರಗಳು ಮಾತ್ರ)ಗಳನ್ನು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರಿಗೆ ಬಿಡುಗಡೆ ಮಾಡಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ.

**<u>ಷರತ್ತುಗಳು:-</u>**

1. ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸತಕ್ಕದ್ದು.
2. ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.
3. ಮಂಜೂರು ಮಾಡಿರುವ ಅನುದಾನ ಸಮರ್ಪಕವಾಗಿ ವೆಚ್ಚವಾಗಿರುವ ಬಗ್ಗೆ, ಲೆಕ್ಕಪರಿಶೋಧಕರಿಂದ ದೃಢೀಕರಿಸಿದ ಲೆಕ್ಕಪಟ್ಟಿ ಹಾಗೂ ಹಣಬಳಕೆ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸುವುದು.
4. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ-1999 ಹಾಗೂ ನಿಯಮಗಳು-2000 ಅನ್ನು ಕಡ್ಡಾಯವಾಗಿ ಪಾಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್. ಡಿ 01 ಟಿ.ಎಫ್.ಪಿ 2025, ದಿನಾಂಕ: 02.04.2025ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S. Geeta 24/6/2025

(ಎಸ್.ಗೀತಾಬಾಯಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ (ಸಂಸ್ಕೃತಿ)

**<u>ಇವರಿಗೆ:-</u>**

1. ಮಹಾಲೇಖಪಾಲರು, (ಎ & ಇ), (ಜಿಎಸ್ ಎಸ್ ಎ), (ಇ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಆಯುಕ್ತರು, ಖಜಾನೆ ಆಯುಕ್ತಾಲಯ, ಕೆ.ಪಿ.ಸಿ.ಎಲ್, 6ನೇ ಮಹಡಿ, ಔಷಧ ನಿಯಂತ್ರಣ ಕಚೇರಿ, ಪ್ಯಾಲೇಸ್ ರಸ್ತೆ, ಬೆಂಗಳೂರು.
3. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು.
4. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
5. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7/ಗಣಕ ಕೋಶ), ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತ ಶಾಖೆ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.